ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ.

2027(2352) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊನ್ನಾವರ ತಾಲ್ಲೂಕು ಅತಿದೊಡ್ಡ ತಾಲ್ಲೂಕು ಆಗಿರುವುದರಿಂದ ಇಲ್ಲಿಯ ವಿದ್ಯಾರ್ಥಿಗಳ ಅವಶ್ಯಕತೆಗನುಗುಣವಾಗಿ ಸರ್ಕಾರಿ ಕಲಾ, ವಿಜ್ಞಾನ, ವಾಣಿಜ್ಯ ಪದವಿ ಕಾಲೇಜನ್ನು ಈವರೆಗೆ ಸ್ಥಾಪಿಸದಿರಲು ಕಾರಣಗಳೇನು;

ಆ) ಸರ್ಕಾರಿ ಪದವಿ ಕಾಲೇಜು ಇಲ್ಲದ ಕಾರಣ ಖಾಸಗಿ ಕಾಲೇಜಿನ ದುಬಾರಿ ಶುಲ್ಕ ಪಾವತಿಸಲಾಗದೆ ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಹೊನ್ನಾವರದಲ್ಲಿ ಸರ್ಕಾರಿ ಪದವಿ ಕಾಲೇಜು ಸ್ಥಾಪನೆಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ) ಹೊನ್ನಾವರದಲ್ಲಿ ಎ.ಪಿ.ಇ. ಸಂಸ್ಥೆಯ ಎಸ್.ಬಿ.ಎಂ. ಪದವಿ ಅನುದಾನಿತ ಕಾಲೇಜಿನದ್ದು ಈ ಕಾಲೇಜಿಗೆ ಸರ್ಕಾರ ವೇತನ ಅನುದಾನ ನೀಡುತ್ತಿರುವುದರಿಂದ ಹೊಸದಾಗಿ ಸರ್ಕಾರಿ ಕಾಲೇಜನ್ನು ಪ್ರಾರಂಭಿಸುವ ಅಗತ್ಯತೆ ಕಂಡುಬಂದಿರಲಿಲ್ಲ

ಆ) ಹೌದು

ಇ) ಈ ಮೇಲೆ (ಆ) ದಲ್ಲಿ ಹೇಳಿರುವುದರ ಮೇರೆಗೆ ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

2029 (2354) ಶ್ರೀ ಮೋಹನ್ ಕೃಷ್ಣಶೆಟ್ಟಿ (ಕುಮಟಾ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 60 ಮಕ್ಕಳಿಗಿಂತ ಕಡಿಮೆ ಇರುವ ಹಿರಿಯ ಪ್ರಾಥಮಿಕ ಶಾಲೆಯನ್ನು ಕಿರಿಯ ಪ್ರಾಥಮಿಕ ಶಾಲೆಯಾಗಿ ಮಾರ್ಪಡಿಸುವಂತೆ ಸರ್ಕಾರ ಆದೇಶಿಸಿದೆಯೇ;

ಆ) ಆದೇಶಿಸಿದ್ದರೆ, ಗುಡ್ಡಗಾಡು ಮಲೆನಾಡು ಪ್ರದೇಶ ಹೊಂದಿರುವ ಉತ್ತರ ಕನ್ನಡ ಜಿಲ್ಲೆಯ ಗ್ರಾಮೀಣ ಭಾಗದ ಮಕ್ಕಳು ಪ್ರಾಥಮಿಕ ಶಿಕ್ಷಣದಿಂದ ವಂಚನೆಗೊಳಗಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ಈ ಶಾಲೆಗಳನ್ನು ರದ್ದುಪಡಿಸುವ ಆದೇಶ ಹಿಂದಕ್ಕೆ ಪಡೆಯಲಾಗುವುದೇ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 60 ಮಕ್ಕಳಿಗಿಂತ ಕಡಿಮೆ ಇರುವ ಹಿರಿಯ ಪ್ರಾಥಮಿಕ ಶಾಲೆಗಳನ್ನು ಕಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಮಾರ್ಪಡಿಸುವ ವಿಚಾರವನ್ನು ಪರಿಶೀಲಿಸಿ, 60 ಮಕ್ಕಳಿಗಿಂತ ಕಡಿಮೆ ಇರುವ ಹಿರಿಯ ಪ್ರಾಥಮಿಕ ಶಾಲೆಗಳನ್ನು ಕಾರ್ಯಸಾಧುವಲ್ಲದ ಶಾಲೆಗಳೆಂದು ಪರಿಗಣಿಸಿ, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಾಗಿ ಪರಿವರ್ತಿಸಲು ನಿರ್ದೇಶಕರು (ಪ್ರಾಶಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುರವರ ಪತ್ರ ಸಂಖ್ಯೆ: ಸಿ3 (7) ಪ್ರಾಶಿ ಹುದ್ದೆ ಸ್ಥಳಾ 38/2006/07, ದಿನಾಂಕ 16-10-2006 ರಂದು ಸುತ್ತೋಲೆಯನ್ನು ಹೊರಡಿಸಿದ್ದಾರೆ.

ಆ) ದಿನಾಂಕ 16-10-2006 ರಂದು ಹೊರಡಿಸಿರುವ ಆದೇಶದಲ್ಲಿ ಗುಡ್ಡಗಾಡು ಮತ್ತು ಮಲೆನಾಡು ಪ್ರದೇಶಗಳನ್ನು ಹೊರತು ಪಡಿಸಿ ಉಳಿದ ಪ್ರದೇಶದಲ್ಲಿ ಮಾತ್ರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಾಗಿ ಪತಿವರ್ತಿಸಲು ಆದೇಶಿಸಿದೆ.

ಇ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

2033 (2379) ಶ್ರೀ ಕೆ. ರಘುಪತಿ ಭಟ್ (ಉಡುಪಿ) :- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಾದ್ಯಂತ ಗ್ರಾಮ ಪಂಚಾಯತ್ ಕಾರ್ಯದರ್ಶಿ ಹುದ್ದೆಯನ್ನು ಶಿರಸ್ತೇದಾರರ ಹುದ್ದೆಗೆ ಮೇಲ್ದರ್ಜೆಗೇರಿಸುವುದು ಸರ್ಕಾರದ ಮುಂದಿನ ನಿರ್ಧಾರ ಯಾವ ಹಂತದಲ್ಲಿದೆ;

ಆ) ಈ ಉದ್ದೇಶ ಕಾರ್ಯಗತಗೊಳ್ಳುವಾಗ ಪ್ರಸಕ್ತ ಪಂಚಾಯತ್ ಕಾರ್ಯದರ್ಶಿಗಳಾಗಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮಾಭಿವೃದ್ಧಿ ಇಲಾಖೆಯ ಹಿರಿಯ ನೌಕರರಿಗೆ ಶೇ. 50 ಕೋಟಾ ಕಾಯ್ದಿರಿಸುವ ಬಗ್ಗೆ ಬೇಡಿಕೆ ಇರುವುದು ಸರ್ಕಾರ ಗಮನಿಸಿದೆಯೇ;

ಇ) ಗಮನಿಸಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು;

ಈ) ಉಡುಪಿ ಜಿಲ್ಲೆಯಲ್ಲಿ ಹತ್ತನೆ (ಎಸ್.ಎಸ್.ಎಲ್.ಸಿ) ತರಗತಿ ಪಾಸಾಗಿ ಹತ್ತು ವರ್ಷಗಳಿಗೂ ಅಧಿಕ ಸೇವೆ ಸಲ್ಲಿಸುತ್ತಿರುವ 80ಕ್ಕೂ ಅಧಿಕ ಗ್ರಾಮ ಪಂಚಾಯತ್ ನೌಕರರಿಗೆ ಪಂಚಾಯತ್ ಕಾರ್ಯದರ್ಶಿ ಹುದ್ದೆ ನೀಡುವಲ್ಲಿ ವಿಳಂಬವೇಕೆ, ಈ ಹುದ್ದೆಯ ಕೋಟಾವನ್ನು ಶೇ 40ರಿಂದ 50 ಕ್ಕೆ ವೃದ್ಧಿಸುವ ಪ್ರಸ್ತಾವನೆ ಜಾರಿಗೆ ವಿಳಂಬವಾಗಲು ಕಾರಣಗಳೇನು?